ಕರ್ನಾಟಕ ಸರ್ಕಾರ
# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ,
ಮಲ್ಲೇಶ್ವರಂ 6ನೇ ಅಡ್ಡರಸ್ತೆ, ಬೆಂಗಳೂರು-560003

Email Id: adpiqsection@gmail.com Phone No: 080-23460525

ಸಂಖ್ಯೆ: ಕ್ಯೂ3/ಡಿಪಿಎಸ್ಇ/ಮು.ಪ/ಜುಲೈ-2022/01/2022-23 ದಿನಾಂಕ: 31/05/2022

## ಅಧಿಸೂಚನೆ

ವಿಷಯ:- ಜುಲೈ-2022ರ ಮಾಹೆಯಲ್ಲಿ ನಡೆಯಲಿರುವ ಪ್ರಥಮ ಮತ್ತು ದ್ವಿತೀಯ ಡಿಪಿಎಸ್ಇ ಪರೀಕ್ಷೆಗೆ ಪರೀಕ್ಷಾ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರಿ ಆದೇಶ ಸಂಖ್ಯೆ: ಇಡಿ06/ಎಂಪಿಇ2017;ಬೆಂಗಳೂರು; ದಿನಾಂಕ:05/07/2019.

2.ಡಿಎಸ್ಇಆರ್‌ಟಿ ಪತ್ರ ಸಂಖ್ಯೆ:ಶಿತ6.ಸ.ಶಿ.ತಸಂ.ಪ್ರ.ದಾಖಲಾತಿ07;2019-20; ದಿನಾಂಕ:12.10.2019.

3. ದಿನಾಂಕ:26/07/2021ರಂದು ಡಿ.ಎಸ್.ಇ.ಆರ್.ಟಿ.ಯಲ್ಲಿ ನಡೆದ ಸಭೆಯ ನಡಾವಳಿ.

*****

2021-22ನೇ ಸಾಲಿನ ಪ್ರಥಮ ಮತ್ತು ದ್ವಿತೀಯ ಡಿ.ಪಿ.ಎಸ್.ಇ ವಾರ್ಷಿಕ ಕಾರ್ಯ ಯೋಜನೆಯಂತೆ ಶೈಕ್ಷಣಿಕ ಅವಧಿಯ ಪರೀಕ್ಷೆಗಳನ್ನು ಜುಲೈ-2022ರ ಮೊದಲ ವಾರದಲ್ಲಿ ನಡೆಸಲು ತೀರ್ಮಾನಿಸಲಾಗಿದೆ. ಅದರಂತೆ ಪ್ರಥಮ ಮತ್ತು ದ್ವಿತೀಯ ಡಿಪಿಎಸ್ಇ ಹೊಸ ಮತ್ತು ಪುನರಾವರ್ತಿತ ಅಭ್ಯರ್ಥಿಗಳಿಗೆ ಲಿಖಿತ (ಥಿಯರಿ) ಪರೀಕ್ಷೆಯನ್ನು ದಿನಾಂಕ:04/07/2022 ರಿಂದ ದಿನಾಂಕ:09/07/2022 ರವರೆಗೆ ನಡೆಸಲು ತೀರ್ಮಾನಿಸಲಾಗಿದೆ.ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ 2019-20ನೇ ಸಾಲಿನಿಂದ ಡಿಪಿಎಸ್ಇ ಪರೀಕ್ಷಾ ಪ್ರಕ್ರಿಯೆಗಳನ್ನು Online ವ್ಯವಸ್ಥೆಗೆ ತರಲಾಗಿದೆ. ಈ ಹಿನ್ನೆಲೆಯಲ್ಲಿ ಈ ಬಾರಿ ಡಿಪಿಎಸ್ಇ ಪರೀಕ್ಷೆಗೆ Online ಮೂಲಕ ಹೊಸ ಹಾಗೂ ಅನುತ್ತೀರ್ಣ ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಪರೀಕ್ಷಾ ವೇಳಾಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಗಳು ನಿಯಮಾನುಸಾರ ಶೈಕ್ಷಣಿಕ ಚಟುವಟಿಕೆಗಳನ್ನು ನಿರ್ವಹಿಸುತ್ತಿರುವ ಸಂಸ್ಥೆಯ ಮುಖ್ಯಸ್ಥರು ತಮ್ಮ ಸಂಸ್ಥೆಯಿಂದ ಹಾಜರಾಗುವ ಅರ್ಹ ಅಭ್ಯರ್ಥಿಗಳ ವಿವರಗಳನ್ನು ಅರ್ಜಿ ನಮೂನೆಯಲ್ಲಿ ಮಂಡಳಿಯ https://sslc.karnataka.gov.in ಜಾಲತಾಣದಲ್ಲಿ Other Exams Portal/DPSE Examination ನಲ್ಲಿ Institute Login ಮೂಲಕ Upload ಮಾಡಲು ಸೂಚಿಸಿದೆ.

1. ದಾಖಲಾತಿ ಅನುಮೋದನಾ ಪಟ್ಟಿ:-

ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಗಳು ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯರವರ ನಿರ್ದೇಶನ ಮತ್ತು ಮಾರ್ಗದರ್ಶನಗಳಂತೆ, ಜಿಲ್ಲಾ ಡಯಟ್ ಪ್ರಾಂಶುಪಾಲರು ಡಿಪಿಎಸ್ಇ ಅಭ್ಯರ್ಥಿಗಳ ನಾಮಯಾದಿಪಟ್ಟಿ (Nominal Roll) ಪರಿಶೀಲಿಸಿ ಅನುಮೋದಿಸುವುದು.

2. ಪರೀಕ್ಷಾ ಶುಲ್ಕದ ವಿವರ:- 2.1. ಹೊಸ ಅಭ್ಯರ್ಥಿಗಳಿಗೆ

| ಕ್ರಮ ಸಂಖ್ಯೆ | ಪರೀಕ್ಷೆ | ಒಟ್ಟು ಶುಲ್ಕ |
|---|---|---|
| 01 | ಪ್ರಥಮ ಡಿಪಿಎಸ್ಇ | 1107-00 |
| 02 | ದ್ವಿತೀಯ ಡಿಪಿಎಸ್ಇ | 1120-00 |

(ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಪ್ರವರ್ಗ1 ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡಲಾಗಿದೆ

2.2. (ಪುನರಾವರ್ತಿತ ಅಭ್ಯರ್ಥಿಗಳಿಗೆ)

| ಕ್ರಮ ಸಂಖ್ಯೆ | ಪರೀಕ್ಷೆ | ಒಟ್ಟು ಶುಲ್ಕ |
|---|---|---|
| 01 | ಒಂದು ವಿಷಯಕ್ಕೆ | 300–00 |
| 02 | ಎರಡು ವಿಷಯಗಳಿಗೆ | 600–00 |
| 03 | ಮೂರು ವಿಷಯಗಳಿಗೆ | 1080–00 |

(ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಪ್ರವರ್ಗ1 ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕ ವಿನಾಯಿತಿ ಇದೆ)

3. . ಪರೀಕ್ಷಾ ಶುಲ್ಕ ಪಾವತಿಸುವ ವಿಧಾನ

- ಅಭ್ಯರ್ಥಿಗಳ ಪರೀಕ್ಷಾ ಅರ್ಜಿಯನ್ನು ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು ಮಂಡಳಿಯ ಜಾಲತಾಣದಲ್ಲಿ, ತಮ್ಮ ಸಂಸ್ಥೆಯ Login ಮೂಲಕ Upload ಮಾಡಬೇಕು. ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಸಂಸ್ಥೆವಾರು ಪರೀಕ್ಷಾ ಶುಲ್ಕ ಪಾವತಿಗೆ ಸಂಬಂಧಪಟ್ಟಂತೆ ಆನ್‌ಲೈನ್‌ನಲ್ಲಿ ಡೆಬಿಟ್‌ಕಾರ್ಡ್/ ಕ್ರೆಡಿಟ್‌ಕಾರ್ಡ್/ನೆಟ್‌ಬ್ಯಾಂಕಿಂಗ್ ಮೂಲಕ ಶುಲ್ಕ ಪಾವತಿಸಲು ಅವಕಾಶ ಕಲ್ಪಿಸಿದೆ. ಪಾವತಿಸಿದ ಶುಲ್ಕದ ರಶೀದಿಯನ್ನು ಡಯಟ್ ಪ್ರಾಂಶುಪಾಲರ ಮೂಲಕ ಮಂಡಳಿಗೆ ಸಲ್ಲಿಸುವುದು.
- ಆನ್‌ಲೈನ್ ಚಲನ್ ಹೊರತುಪಡಿಸಿ ಮತ್ಯಾವುದೇ ಚಲನ್, ಡಿ.ಡಿ, ಚೆಕ್ ಮೂಲಕ ಮಾಡಲಾದ ಪಾವತಿಗಳನ್ನು ಮಾನ್ಯ ಮಾಡಲಾಗುವುದಿಲ್ಲ. ಅಭ್ಯರ್ಥಿಗಳ ಶುಲ್ಕವನ್ನು ನಿಗದಿತ ದಿನಾಂಕದ ನಂತರ ಚಲನ್ ಮೂಲಕ ಪಾವತಿಸಿದಲ್ಲಿ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಹಾಗೂ ಪರೀಕ್ಷಾ ಶುಲ್ಕವನ್ನು ಪಾವತಿಸಿದ್ದರೂ ಸಹ ಹಿಂದಿರುಗಿಸಲಾಗುವುದಿಲ್ಲ.
- ಮಂಡಳಿ ನಿಗದಿಪಡಿಸಿದ ಕೊನೆಯ ದಿನಾಂಕಗಳು ಸರ್ಕಾರಿ ರಜಾ ದಿನವೆಂದು ಘೋಷಿಸಿದ್ದಲ್ಲಿ ಆ ದಿನದ ಮಾರನೆಯ ಕೆಲಸದ ದಿನವನ್ನು ಕೊನೆಯ ದಿನವೆಂದು ಪರಿಗಣಿಸಲಾಗುವುದು.

4. ಅರ್ಜಿಗಳನ್ನು ಸಲ್ಲಿಸಲು ನಿಗದಿಗೊಳಿಸಿರುವ ದಿನಾಂಕಗಳ ವಿವರ.

| ಕ್ರಸಂ | ವಿವರ | ದಿನಾಂಕ: |
|---|---|---|
| 01. | ಅಭ್ಯರ್ಥಿಗಳಿಂದ ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಬಗ್ಗೆ ಅಧಿಸೂಚನೆ ಮತ್ತು ವೇಳಾಪಟ್ಟಿ ಪ್ರಕಟಿಸುವ ದಿನಾಂಕ | 04/06/2022 |
| 02 | ಪರೀಕ್ಷಾ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಪ್ರಾರಂಭ ದಿನಾಂಕ | 10/06/2022 |
| 03 | ಪರೀಕ್ಷಾ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕೊನೆಯ ದಿನಾಂಕ | 13/06/2022 |
| 04 | ಜುಲೈ–2022 ರ ಡಿಪಿಎಸ್‌ಇ ಪರೀಕ್ಷೆಗೆ ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ಪ್ರಾರಂಬಿಕ ದಿನಾಂಕ | 18/06/2022 |
| 05 | ಜುಲೈ–2022 ರ ಡಿಪಿಎಸ್‌ಇ ಪರೀಕ್ಷೆಗೆ ಆನ್‌ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 19/06.2022 |
| 06 | ಡಯಟ್‌ನಿಂದ ಅರ್ಜಿಗಳನ್ನು ಅನುಮೋದಿಸಲು ಕೊನೆಯ ದಿನಾಂಕ | 21/06/2022 |
| 07 | ನಾಮಿನಲ್ ರೋಲ್, ಶುಲ್ಕ ಪಾವತಿಸಿದ ಮೂಲ ಆನ್‌ಲೈನ್ ಚಲನ್ ಪ್ರತಿ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳನ್ನು ಸಂಸ್ಥೆಗಳಿಂದ ಡಯಟ್‌ಗೆ ಸಲ್ಲಿಸಲು ಕೊನೆಯ ದಿನಾಂಕ | 24/06/2022 |
| 08 | ಪ್ರವೇಶ ಪತ್ರ ಆನ್‌ಲೈನ್‌ಅಲ್ಲಿ ಪ್ರಕಟಿಸುವ ದಿನಾಂಕ | 27/06/2022 |

5. ಅರ್ಜಿಗಳನ್ನು ಸಲ್ಲಿಸಲು ಸಂಸ್ಥೆಯ ಮುಖ್ಯಸ್ಥರು ಪಾಲಿಸಬೇಕಾದ ಸೂಚನೆಗಳು:

(ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಭರ್ತಿ ಮಾಡಲು ಅನುಕೂಲವಾಗುವಂತೆ FlowChart ನೀಡಲಾಗಿದ್ದು ಅದನ್ನು ಕಡ್ಡಾಯವಾಗಿ ಓದಿಕೊಳ್ಳುವುದು.)

1 ಜುಲೈ–2022 ಪ್ರಥಮ/ದ್ವಿತೀಯ ಡಿಪಿಎಸ್‌ಇ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ನೊಂದಣಿ ಮಾಹಿತಿಯನ್ನು ಮಂಡಳಿಯ ಜಾಲತಾಣದಲ್ಲಿ Other Exams Portal/ DPSE Examination ಮೂಲಕ ಸಂಸ್ಥೆಯ Login ನಲ್ಲಿ Upload ಮಾಡಲು ಸೂಚಿಸಿದೆ.

2 ಪತ್ರ ವ್ಯವಹಾರಕ್ಕೆ ಅನುಕೂಲಕರವಾದ ಅಂಚೆ ವಿಳಾಸ, ದೂರವಾಣಿ ಸಂಖ್ಯೆ ಅಥವಾ ಮೊಬೈಲ್ ಫೋನ್ ಸಂಖ್ಯೆ ಹಾಗೂ E-Mail ವಿಳಾಸ ತಪ್ಪದೆ ನಮೂದಿಸುವುದು.

3 **ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಪ್ರವರ್ಗ–1ರ ಅಭ್ಯರ್ಥಿಗಳಿಗೆ ಶುಲ್ಕ ವಿನಾಯಿತಿ ಇದ್ದು, ಅಂತಹ ಅಭ್ಯರ್ಥಿಗಳು ಶುಲ್ಕ ವಿನಾಯಿತಿ ಬಯಸಿದ್ದಲ್ಲಿ ಜಾತಿ ಪ್ರಮಾಣ ಪತ್ರದ RD ಸಂಖ್ಯೆಯನ್ನು ಕಡ್ಡಾಯವಾಗಿ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಬೇಕು. ಹಾಗೂ /ಪ್ರವರ್ಗ1 ಅಭ್ಯರ್ಥಿಗಳು ಶುಲ್ಕ ವಿನಾಯಿತಿ ಬಯಸಿದ್ದಲ್ಲಿ ರೂ. 1.00 ಲಕ್ಷದವರೆಗಿನ ಆದಾಯಮಿತಿ ಹೊಂದಿರಬೇಕು. ಅದಕ್ಕೆ ಸಂಬಂಧಿಸಿದ ಜಾತಿ ಮತ್ತು ಆದಾಯ ಪ್ರಮಾಣಪತ್ರದ RD ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಬೇಕು.**

4 Online ಮೂಲಕ ಸಲ್ಲಿಸಿದ ಅರ್ಜಿಗಳಲ್ಲಿ ತಿದ್ದುಪಡಿಗಳಿದ್ದಲ್ಲಿ ನಿಗಧಿಪಡಿಸಿದ ದಿನಾಂಕದೊಳಗೆ ತಿದ್ದುಪಡಿ ಮಾಡಿಕೊಳ್ಳತಕ್ಕದ್ದು. ಡಯಟ್ ಸಂಸ್ಥೆಯವರು ಅನುಮೋದನೆ ಮಾಡಿದ ನಂತರ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

5 ಒಂದು ವೇಳೆ ಸಂಸ್ಥೆಯ ಹಂತದಲ್ಲಿ Submit ಮಾಡಿದ ನಂತರ ದೋಷಗಳು ಗಮನಕ್ಕೆ ಬಂದಲ್ಲಿ ಸಂಸ್ಥೆಯ ಲಾಗಿನ್‌ನಲ್ಲಿ Up date Application Option ಬಳಸಿ ತಿದ್ದುಪಡಿ ಮಾಡಬಹುದಾಗಿದೆ. .

6 ನಿಗದಿಪಡಿಸಿದ ದಿನಾಂಕದ ನಂತರ ವಿಷಯ/ಮಾಧ್ಯಮ ಇತ್ಯಾದಿ ಬದಲಾವಣೆಗೆ ಅರ್ಜಿ ಸಲ್ಲಿಸಿದಲ್ಲಿ ಪ್ರತಿ ತಿದ್ದುಪಡಿಗೆ **ರೂ.200.00** ದಂಡ ವಿಧಿಸಲಾಗುವುದು.

7 ಮಂಡಳಿಯ ಗಮನಕ್ಕೆ ತರದೇ ಅಭ್ಯರ್ಥಿಗಳ ಪರೀಕ್ಷಾ ಕೇಂದ್ರದ ಬದಲಾವಣೆಗೆ ಅವಕಾಶ ಇರುವುದಿಲ್ಲ.

8 **ಪರೀಕ್ಷಾ ಅರ್ಜಿಗಳನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಸಲ್ಲಿಸುವ ಸಮಯದಲ್ಲಿ ಅಭ್ಯರ್ಥಿಗಳ ನೇರ ಭಂಗಿಯ ಭಾವಚಿತ್ರ 60 ರಿಂದ 80 KB ಹಾಗೂ ಸಹಿಯನ್ನು 20 ರಿಂದ 50 KB JPEG ನಮೂನೆಯಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯ.**

9 **ಭಾವಚಿತ್ರವನ್ನು ಮಾತ್ರವೇ ಸ್ಕ್ಯಾನ್ ಮಾಡಿಕೊಂಡು ಅಪ್ ಲೋಡ್ ಮಾಡಬೇಕೇ ಹೊರತು ಇಡೀ ಪೇಪರ್ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡುವಂತಿಲ್ಲ.**

10 ಆನ್‌ಲೈನ್‌ನಲ್ಲಿ ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡುವಾಗ ನೈಜ ಅಭ್ಯರ್ಥಿಯ ಬದಲು ಬೇರೆ ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಿದರೆ ಅಂತಹ ಸಂಸ್ಥೆಯ ಪ್ರಾಂಶುಪಾಲರ ಮೇಲೆ ನಿಯಮಾನುಸಾರ ಕಠಿಣ ಕ್ರಮ ಜರುಗಿಸಲಾಗುವುದು. ಇಂತಹ ದೋಷಗಳನ್ನು ಪರಿಶೀಲಿಸದೆ, ಖಾತ್ರಿಪಡಿಸಿಕೊಳ್ಳದೆ, ಯಥಾವತ್ತಾಗಿ ಅನುಮೋದಿಸುವ ಜಿಲ್ಲಾ ಡಯಟ್ ಪ್ರಾಂಶುಪಾಲರ ಮೇಲೆ ನಿಯಮಾನುರೀತ್ಯಾ ಕ್ರಮಕೈಗೊಳ್ಳಲಾಗುವುದು.

11 ಪ್ರಥಮ ಡಿಪಿಎಸ್‌ಇ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಮಾರ್ಚ್ 2002 ಹಾಗೂ ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ವ್ಯಾಸಂಗ ಮಾಡಿದ್ದಲ್ಲಿ ಅಥವಾ ಮುಕ್ತ ಶಾಲಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಅಥವಾ ಕೇಂದ್ರ ಪಠ್ಯಕ್ರಮದ ಪರೀಕ್ಷಾ ಮಂಡಳಿ ಅಥವಾ ಬೇರೆ ರಾಜ್ಯಗಳ ಪರೀಕ್ಷಾ ಮಂಡಳಿ ನಡೆಸಿದ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರು ಅಂಕಪಟ್ಟಿಗಳನ್ನುಪರಿಶೀಲಿಸಿ ಸೂಕ್ತ ಕಾಲಂನಲ್ಲಿ ವಿವರಗಳನ್ನು ಭರ್ತಿ ಮಾಡಿ Upload ಮಾಡಬೇಕು, ಈ ಅಭ್ಯರ್ಥಿಗಳ ವಿವರಗಳು **AUTO FETCH** ಆಗುವುದಿಲ್ಲವಾದ್ದರಿಂದ Online ಅರ್ಜಿಯಲ್ಲಿನ ಎಲ್ಲಾ ಅಂಕಣಗಳನ್ನು ಭರ್ತಿಮಾಡಬೇಕು.

12 ಪ್ರಥಮ ಡಿಪಿಎಸ್‌ಇ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು 2003 ಹಾಗೂ 2003ರ ನಂತರದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡುವಾಗ ಎಸ್.ಎಸ್.ಎಲ್.ಸಿ ನೋಂದಣಿ ಸಂಖ್ಯೆಯನ್ನು ನಮೂದಿಸಿದಾಗ ಅಭ್ಯರ್ಥಿಗಳ ಮಾಹಿತಿಗಳು **AUTO FETCH** ಆಗುತ್ತವೆ. ಉಳಿದ ಮಾಹಿತಿಗಳನ್ನು ಸಂಸ್ಥೆಯ ಮುಖ್ಯಸ್ಥರು ಭರ್ತಿ ಮಾಡುವುದು.

13 ಎಸ್.ಎಸ್.ಎಲ್.ಸಿ ನೋಂದಣಿ ಸಂಖ್ಯೆ ಮೂಲಕ **AUTOFETCH** ಆದ ಮಾಹಿತಿಗಳನ್ನು ತಿದ್ದುಪಡಿ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.

14 ದ್ವಿತೀಯ ಡಿಪಿಎಸ್‌ಇ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪ್ರಥಮ ಡಿಪಿಎಸ್‌ಇ ಪರೀಕ್ಷೆಯ ನೊಂದಣಿ ಸಂಖ್ಯೆಯನ್ನು ನಮೂದಿಸಿದಾಗ ಅಭ್ಯರ್ಥಿಗಳ ಮಾಹಿತಿಗಳು **AUTOFETCH** ಆಗುತ್ತದೆ

15 ಸಂಸ್ಥೆಯ ಮುಖ್ಯಸ್ಥರು ಸಂಸ್ಥೆಯ ಲಾಗಿನ್‌ನಲ್ಲಿ ನಾಮಯಾದಿ ಪಟ್ಟಿಯನ್ನು (Nominal Roll) Down load ಮಾಡಿಕೊಂಡು ಪರಿಶೀಲಿಸಿ ಶುಲ್ಕ ಪಾವತಿಸಿದ ಮೂಲ ಚಲನ್‌ನೊಂದಿಗೆ ಡಯಟ್‌ಗೆ ಸಲ್ಲಿಸುವುದು.

16 ಮೇಲಿನ ಎಲ್ಲಾ ನಿಯಮಗಳನ್ನು ಸಂಬಂಧಪಟ್ಟ ಡಿಪಿಎಸ್‌ಇ ಸಂಸ್ಥೆಯ ಮುಖ್ಯಸ್ಥರು ತಪ್ಪದೇ ಪಾಲಿಸಲು ತಿಳಿಸಿದೆ. ನಿಯಮಗಳನ್ನು ಪಾಲಿಸದಿದ್ದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಸ್ಥೆಯ ಮುಖ್ಯಸ್ಥರನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

## 6 . ಫಲಿತಾಂಶ ಉತ್ತಮಪಡಿಸಿಕೊಳ್ಳಲು ಅನುಮತಿ ನೀಡುವ ಬಗ್ಗೆ:-

ಪ್ರಥಮ ಡಿಪಿಎಸ್‌ಇ ಫಲಿತಾಂಶ ಉತ್ತಮ ಪಡಿಸಿಕೊಳ್ಳಲು ಮಂಡಳಿಯಿಂದ ಅನುಮತಿ ಪಡೆದಿರಬೇಕು. ಅನುಮತಿ ಪಡೆದಿರುವ ಆದೇಶದ ಪ್ರತಿಯೊಂದಿಗೆ ಡಯಟ್ ಮುಖಾಂತರ ಮಂಡಳಿಗೆ ಸಲ್ಲಿಸಬೇಕು. ತದನಂತರ ಸಂಬಂಧಿಸಿದ ಸಂಸ್ಥೆಯ Login ಗೆ ಆ ಅಭ್ಯರ್ಥಿಯ ಅರ್ಜಿ ನಮೂನೆಯನ್ನು Upload ಮಾಡಲಾಗುವುದು.

## 7. ವಿಭಿನ್ನ ಸಾಮರ್ಥ್ಯವುಳ್ಳ ಅಭ್ಯರ್ಥಿಗಳಿಗೆ ಬರಹಗಾರರ ಮತ್ತು ಹೆಚ್ಚಿನ ಕಾಲಾವಕಾಶ ನೀಡುವ ಬಗ್ಗೆ:-

ವಿಭಿನ್ನ ಸಾಮರ್ಥ್ಯವುಳ್ಳ (Differently Abled) ವಿಕಲಚೇತನ ಅಭ್ಯರ್ಥಿಗಳಿಗೆ ಸರ್ಕಾರದ ಪತ್ರ ಸಂಖ್ಯೆ:ಇಡಿ98/ಇಎಸ್‌ಡಬ್ಲ್ಯೂ2009 ದಿನಾಂಕ:10.06.2009ರಲ್ಲಿ ಸರ್ಕಾರವು ವಿಧಿಸಿರುವ ಷರತ್ತುಗಳನ್ವಯ ಅಂಗವೈಕಲ್ಯತೆ ಹೊಂದಿರುವ ಅಭ್ಯರ್ಥಿಗಳಿಗೆ ಹೆಚ್ಚಿನ ಕಾಲಾವಕಾಶ ಮತ್ತು ಬರಹಗಾರರ ಸೌಲಭ್ಯಗಳನ್ನು ನೀಡುವ ಬಗ್ಗೆ ಜಿಲ್ಲಾ ಡಯಟ್ ಪ್ರಾಂಶುಪಾಲರ ಹಂತದಲ್ಲಿ ಕ್ರಮಕೈಗೊಳ್ಳುವುದು. ಸರ್ಕಾರಿ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು. ಯಾವುದೇ ವ್ಯತ್ಯಾಸವಾದಲ್ಲಿ ಜಿಲ್ಲಾ ಡಯಟ್ ಪ್ರಾಂಶುಪಾಲರನ್ನು ನೇರಹೊಣೆಗಾರರನ್ನಾಗಿ ಮಾಡಲಾಗುವುದು.

## 8. ಪ್ರಥಮ ಮತ್ತು ದ್ವಿತೀಯ ಡಿಪಿಎಸ್‌ಇ ಪಠ್ಯಕ್ರಮದನ್ವಯ ಬಾಹ್ಯ ಪರೀಕ್ಷೆಗೆ ವಿಷಯಗಳ ವಿವರ ನಿಗಧಿಪಡಿಸಲಾಗಿರುವ ಗರಿಷ್ಠ ಅಂಕಗಳು ಹಾಗೂ ನಿಗಧಿಪಡಿಸಿರುವ ಅವಧಿ.

ಪ್ರಥಮ ಡಿಪಿಎಸ್‌ಇ

| ವಿಷಯ | ವಿಷಯ ಸಂಕೇತ ಮತ್ತು ಪಠ್ಯವಸ್ತು | ಗರಿಷ್ಠ ಅಂಕಗಳು | ನಿಗಧಿಪಡಿಸಲಾದ ಅವಧಿ |
|---|---|---|---|
| Foundations of ECE | 1001 X | 100 | 3 ಘಂಟೆ |
| Psychology of child development | 1002 X | 100 | 3 ಘಂಟೆ |
| Methods and Strategies of ECE | 1003 X | 100 | 3 ಘಂಟೆ |

ದ್ವಿತೀಯ ಡಿಪಿಎಸ್‌ಇ

| ವಿಷಯ | ವಿಷಯ ಸಂಕೇತ ಮತ್ತು ಪಠ್ಯವಸ್ತು | ಗರಿಷ್ಠ ಅಂಕಗಳು | ನಿಗಧಿಪಡಿಸಲಾದ ಅವಧಿ |
|---|---|---|---|
| Organisation and Management of Pre-Schools | 2001 X | 100 | 3 ಘಂಟೆ |
| Management Of child health and nutrition | 2002 X | 100 | 3 ಘಂಟೆ |
| Inclusive and value education | 2003 X | 100 | 3 ಘಂಟೆ |

- ಜಿಲ್ಲಾ ಡಯಟ್ ಪ್ರಾಂಶುಪಾಲರಿಂದ ದಾಖಲಾತಿ ಅನುಮೋದನೆಯಾಗಿಲ್ಲದೇ ಇರುವ ಅಭ್ಯರ್ಥಿಗಳಿಗೆ ಪರೀಕ್ಷೆ ತೆಗೆದುಕೊಳ್ಳಲು ಅವಕಾಶವಿರುವುದಿಲ್ಲ.
- ಡಯಟ್ ಪ್ರಾಂಶುಪಾಲರು ತಮ್ಮ ಜಿಲ್ಲೆಯಲ್ಲಿರುವ ಡಿಪಿಎಸ್‌ಇ ಕಾಲೇಜುಗಳು ಸಲ್ಲಿಸಿರುವ ನಾಮಯಾದಿ ಪಟ್ಟಿಯನ್ನು ತಮ್ಮ ಹಂತದಲ್ಲಿ ರಕ್ಷಿಸಿಡುವುದು ಹಾಗೂ ಮಂಡಳಿಯಿಂದ ಕೇಳಿದಾಗ ಅದನ್ನು ಮಂಡಳಿಗೆ ಸಲ್ಲಿಸುವುದು.
- ಡಯಟ್ ಹಂತದಲ್ಲಿ ಶಿಕ್ಷಕರ ತರಬೇತಿ ಸಂಸ್ಥೆಗಳಿಂದ ಪಾವತಿಸಿದ ಪರೀಕ್ಷಾ ಶುಲ್ಕದ ಚಲನ್ ಪರಿಶೀಲಿಸಿ ಮಂಡಳಿಗೆ ಕಳುಹಿಸುವುದು.
- ಅರ್ಜಿ ಸಲ್ಲಿಕೆ ಮುಕ್ತಾಯವಾದ ನಂತರ ಮಂಡಳಿಯ ಹಂತದಲ್ಲಿ ಪರಿಶೀಲಿಸಿ ಸಂಸ್ಥೆಯ Loginಗೆ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು Upload ಮಾಡಲಾಗುವುದು. ಸಂಸ್ಥೆಯ ಮುಖ್ಯಸ್ಥರು ಅದನ್ನು ಡೌನ್‌ಲೋಡ್ ಮಾಡಿಕೊಂಡು ಮಂಡಳಿ ಇಂದ ಸೂಚಿಸಲ್ಪಟ್ಟ ನಿಗದಿತ ದಿನದೊಳಗೆ ದೋಷಗಳಿದ್ದಲ್ಲಿ ಸರಿಪಡಿಸುವುದು.
- ಆಗಸ್ಟ್-2021ರ ಮುಖ್ಯ ಪರೀಕ್ಷೆ ಹಾಗೂ ಡಿಸೆಂಬರ್-2021ರ ಪೂರಕ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪ್ರಥಮ ಡಿಪಿಎಸ್‌ಇ ಅಭ್ಯರ್ಥಿಗಳ ಎಂ.ಎಸ್.ಎಗಳ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ಅಳವಡಿಸಲಾಗಿದೆ.

9 . ಆಂತರಿಕ ಮತ್ತು ಪ್ರಾಯೋಗಿಕ ಪರೀಕ್ಷೆಗಳ ಅಂಕಗಳನ್ನು ಸಲ್ಲಿಸುವ ಬಗ್ಗೆ.

ಈ ಸಾಲಿನ ಅಭ್ಯರ್ಥಿಗಳು ಪಡೆದ ಆಂತರಿಕ ಮೌಲ್ಯಮಾಪನ ಹಾಗೂ ಪ್ರಾಯೋಗಿಕ ಪರೀಕ್ಷೆಗಳ ಅಂಕಗಳನ್ನು ಆನ್‌ಲೈನ್‌ನಲ್ಲಿಯೇ ಭರ್ತಿ ಮಾಡಬೇಕಾಗುತ್ತದೆ. ಇದಕ್ಕಾಗಿ ಸಂಸ್ಥೆಗಳ ಲಾಗಿನ್‌ನಲ್ಲಿ ನಮೂನೆಗಳನ್ನು ಅಪ್‌ಲೋಡ್ ಮಾಡಲಾಗುವುದು. ಸಮನ್ವಯ ಸಮಿತಿಯು ಮೌಲ್ಯಮಾಪನ ಮಾಡಿ ನೀಡಿರುವ ಅಂಕಗಳನ್ನು Upload ಮಾಡಲಾದ ನಮೂನೆಗಳಲ್ಲಿ "Online Mark Porting" ಮೂಲಕ ಮಂಡಳಿಗೆ ಸಲ್ಲಿಸಬೇಕು.

ಸಂಸ್ಥೆಗಳ ಮುಖ್ಯಸ್ಥರು ಈ ಅಂಕಗಳನ್ನು ಭರ್ತಿ ಮಾಡಿ ಸಲ್ಲಿಸಿದ ನಂತರ ಸಂಬಂಧಿಸಿದ ಡಯಟ್‌ಗೆ ಸಮನ್ವಯ ಸಮಿತಿಯು ನೀಡಿದ ಮೂಲ ದಾಖಲೆಗಳನ್ನು ಸಲ್ಲಿಸಬೇಕು. ಡಯಟ್ ಪ್ರಾಂಶುಪಾಲರು ಸಮನ್ವಯ ಸಮಿತಿಯು ನೀಡಿರುವ ಅಂಕಗಳಿಗೂ ಹಾಗೂ ಸಂಸ್ಥೆಯ ಮುಖ್ಯಸ್ಥರು ಭರ್ತಿ ಮಾಡಿರುವ ಅಂಕಗಳಿಗೂ ತಾಳೆಯಾಗುತ್ತಿರುವುದನ್ನು ಖಚಿತಪಡಿಸಿಕೊಂಡು ಆನ್‌ಲೈನ್‌ನಲ್ಲಿ ಇದನ್ನು ಅನುಮೋದಿಸಬೇಕು. ವ್ಯತ್ಯಾಸವಿದ್ದಲ್ಲಿ ಡಯಟ್ ಪ್ರಾಂಶುಪಾಲರು ಇದನ್ನು ಮಂಡಳಿಯ ಗಮನಕ್ಕೆ ತರುವುದು.

ಒಂದು ವೇಳೆ ವ್ಯತ್ಯಾಸವಾದಲ್ಲಿ ಪ್ರತಿ ದೋಷಕ್ಕೆ ಸಂಸ್ಥೆಯ ಮುಖ್ಯಸ್ಥರಿಗೆ ತಲಾ ರೂ.1000/-ದಂತೆ ದಂಡ ವಿಧಿಸಲಾಗುವುದು. ದಂಡವನ್ನು ಪಾವತಿಸಿ ಡಯಟ್ ಪ್ರಾಂಶುಪಾಲರ ಮುಖಾಂತರ ಮನವಿ ಸಲ್ಲಿಸಿದಲ್ಲಿ ಸರಿಪಡಿಸುವ ಬಗ್ಗೆ ಕ್ರಮವಹಿಸಲಾಗುವುದು. ಈ ಕುರಿತಂತೆ ಮಾರ್ಗಸೂಚನೆಗಳೊಂದಿಗೆ ಪ್ರತ್ಯೇಕವಾಗಿ ಸುತ್ತೋಲೆಯನ್ನು ನೀಡಲಾಗುವುದು.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಮನಿಸಿ ಡಯಟ್ ಪ್ರಾಂಶುಪಾಲರು ಹಾಗೂ ಸಂಸ್ಥೆಯ ಮುಖ್ಯಸ್ಥರು ಅಗತ್ಯ ಕ್ರಮವಹಿಸಲು ತಿಳಿಸಿದೆ.

<u>ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿವರ</u>

**1.ಶ್ರೀಮತಿ, ಟಿ.ಡಿ.ಶೈಲ ಸಹಾಯಕ ನಿರ್ದೇಶಕರು, ಡಿಇಡಿ ಶಾಖೆ, ಮೊಬೈಲ್ ಸಂಖ್ಯೆ:9480343741**

**2.ಶ್ರೀ, ರಿಯಾಜ್, ಸಹಾಯಕ ನಿರ್ದೇಶಕರು, ಗಣಕಶಾಖೆ ಮೊಬೈಲ್ ಸಂಖ್ಯೆ:7892195954**

31/5/2022

(ಎಂ.ಆರ್. ಮಾರುತಿ)
ನಿರ್ದೇಶಕರು (ಇತರೆ ಪರೀಕ್ಷೆಗಳು)
ಕ.ಪ್ರೌ.ಶಿ.ಪ.ಮಂಡಳಿ, ಬೆಂಗಳೂರು.

<u>ಪ್ರತಿಗಳು :-</u>

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
2. ನಿರ್ದೇಶಕರು (ಇ.ಪ) ರವರ ಹಾಗೂ ಕಾರ್ಯದರ್ಶಿಗಳು ಆಪ್ತ ಶಾಖೆಗೆ.
3. ರಾಜ್ಯದ ವಿಭಾಗೀಯ ಮಟ್ಟದ ಪ್ರಾದೇಶಿಕ ಪರೀಕ್ಷಾ ಮಂಡಳಿಯ ಕಾರ್ಯದರ್ಶಿಗಳಿಗೆ ಬೆಂಗಳೂರು, ಮತ್ತು ಕಲ್ಬುರ್ಗಿ ವಿಭಾಗ ರವರಿಗೆ ಮುಂದಿನ ಕ್ರಮಕ್ಕಾಗಿ.
4. ಚಿತ್ರದುರ್ಗ ಮತ್ತು ಕಲಬುರಗಿ ಡಯಟ್ ಪ್ರಾಂಶುಪಾಲರುಗಳಿಗೆ ಮುಂದಿನ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು ಕಂಪ್ಯೂಟರ್ ಶಾಖೆಯವರಿಗೆ ಸಂಬಂಧಪಟ್ಟ ಅಧಿಸೂಚನೆಯನ್ನು ವೆಬ್ ಸೈಟ್‌ನಲ್ಲಿ ಅಳವಡಿಸಲು ಸಲ್ಲಿಸಿದೆ.
6. ಸರ್ಕಾರಿ ಶಿಕ್ಷಕರ/ಶಿಕ್ಷಕಿಯರ ಸಂಸ್ಥೆಗಳ ಮುಖ್ಯಸ್ಥರಿಗೆ ಸೂಕ್ತ ಕ್ರಮಕ್ಕಾಗಿ.
7. ಕಛೇರಿ ಪ್ರತಿ.